# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : 939
**ಮಾನ್ಯ ಸದಸ್ಯರ ಹೆಸರು** : ಶ್ರೀ ಬಿ.ಎಂ.ಫಾರೂಖ್
(ವಿಧಾನಸಭೆಯಿಂದ ಚುನಾಯಿತರಾದವರು)
**ಉತ್ತರಿಸಬೇಕಾದ ದಿನಾಂಕ** : 22-02-2024
**ಉತ್ತರಿಸುವ ಸಚಿವರು** : ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ದಕ್ಷಿಣ ಕನ್ನಡ ಜಿಲ್ಲೆಯ ಉಲ್ಲಾಳದ ಕಡಲತೀರದಲ್ಲಿ ನೀಡಲಾಗುತ್ತಿರುವ ಸೌಲಭ್ಯಗಳು ಯಾವುವು; ಹಾಗೂ ಸೌಲಭ್ಯಕ್ಕಾಗಿ ಇದುವರೆಗೂ ಬಿಡುಗಡೆ ಹಾಗೂ ವೆಚ್ಚವಾದ ಅನುದಾನವೆಷ್ಟು; 2020-21 ರಿಂದ ಇಲ್ಲಿಯವರೆಗೆ ಖರ್ಚು ಮಾಡಿದ ವರ್ಷವಾರು ವೆಚ್ಚದ ಮಾಹಿತಿ ನೀಡುವುದು; | ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರು ತಾಲ್ಲೂಕಿನ ಉಳ್ಳಾಲ ನಗರಸಭೆಯ ವ್ಯಾಪ್ತಿಯ ಮೊಗವೀರ ಪಟ್ಟಣ ಬೀಚ್‌ನಿಂದ ಮುಕ್ಕಚ್ಚೇರಿ ಬೀಚ್‌ವರೆಗೆ ರೂ.100.00 ಲಕ್ಷಗಳ ಕಾಮಗಾರಿಗೆ ಅನುದಾನ ಬಿಡುಗಡೆ ಮಾಡುವಂತೆ ಪ್ರಸ್ತಾವನೆ ಸ್ವೀಕೃತವಾಗಿದ್ದು, ಸದರಿ ಪ್ರಸ್ತಾವನೆಯ ವಿಸ್ತೃತವಾದ ಯೋಜನಾ ವರದಿಯನ್ನು ಸಿದ್ಧಪಡಿಸಲು ನಿರ್ದೇಶನಾಲಯದಿಂದ ಕ್ರಮವಹಿಸಲಾಗುತ್ತಿದೆ.<br><br>ಉಲ್ಲಾಳ ಕಡಲ ತೀರಕ್ಕೆ ಈವರೆಗೆ ಯಾವುದೇ ಅನುದಾನ ಬಿಡುಗಡೆ ಮಾಡಿರುವುದಿಲ್ಲ. |
| ಆ) | ಉಲ್ಲಾಳ ಕಡಲ ತೀರದಲ್ಲಿ ಕೇರಳದ ಕೊಚ್ಚಿಯಲ್ಲಿರುವಂತೆ ಪ್ರವಾಸಿ ಹಡಗು ಸೌಲಭ್ಯವನ್ನು ಕಲ್ಪಿಸುವ ಉದ್ದೇಶ ಸರ್ಕಾರದ ಗಮನಕ್ಕೆ ಬಂದಿದೆಯೇ; | ಕರ್ನಾಟಕ ಪ್ರವಾಸೋದ್ಯಮ ನೀತಿ 2020-26ರಡಿ ಹೌಸ್ ಬೋಟ್ ಯೋಜನೆಯಲ್ಲಿ ಹೂಡಿಕೆ ಮಾಡುವ ಹೂಡಿಕೆದಾರರಿಗೆ ಪ್ರೋತ್ಸಾಹಕಗಳು, ಸಹಾಯಧನ ಮತ್ತು ರಿಯಾಯಿತಿಗಳನ್ನು ನೀಡಲು ಅವಕಾಶ ಕಲ್ಪಿಸಲಾಗಿದೆ. |
| ಇ) | ಸದರಿ ಈ ಸೌಲಭ್ಯವನ್ನು ಯಾವ ಕಾಲಮಿತಿಯಲ್ಲಿ ಕಲ್ಪಿಸಲಾಗುವುದು? | ಅನ್ವಯಿಸುವುದಿಲ್ಲ. |

TOR 94 TDV 2024

**(ಎಚ್.ಕೆ.ಪಾಟೀಲ)**
ಕಾನೂನು, ನ್ಯಾಯ, ಮಾನವ ಹಕ್ಕುಗಳು,
ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ
ಹಾಗೂ ಪ್ರವಾಸೋದ್ಯಮ ಸಚಿವರು